ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸ್ಥಳೀಯ ಸಂಸ್ಥೆ ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 21/02/2020

# ) ಕೆಆರ್‌ಐಡಿಎಲ್ ಕಾರ್ಯವೈಖರಿ ಬದಲಾವಣೆಗೆ ಶಿಫಾರಸು

**ವಿಕ ಸುದ್ದಿಲೋಕ** ಬೆಂಗಳೂರು

ಕೆಆರ್‌ಐಡಿಎಲ್ ನಿರ್ವಹಿಸುತ್ತಿರುವ ಕಾಮಗಾರಿಗಳ ವಿಧಿ-ವಿಧಾನಗಳನ್ನು ಹೌಸಿಂಗ್ ಬೋರ್ಡ್ ಮಾದರಿಯಲ್ಲಿ ಬದಲಾಯಿಸಬೇಕೆಂದು ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳು ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ ಮಧ್ಯಂತರ ವರದಿ ಅಭಿಪ್ರಾಯಪಟ್ಟಿದೆ.



ಆರಗ ಜ್ಞಾನೇಂದ್ರ ಸಮಿತಿ ವರದಿ ಸಲ್ಲಿಕೆ

ಶಾಸಕ ಆರಗ ಜ್ಞಾನೇಂದ್ರ ಅಧ್ಯಕ್ಷತೆಯ ಸಮಿತಿ ಗುರುವಾರ ವಿಧಾನಸಭೆಯಲ್ಲಿ ತನ್ನ ವರದಿ ಮಂಡಿಸಿದ್ದು, ಕರ್ನಾಟಕ ಗೃಹ ಮಂಡಳಿ ಮಾದರಿಯಲ್ಲಿ ಸ್ಥಳೀಯವಾಗಿ ನೋಂದಾಯಿಸಿಕೊಂಡ ಗುತ್ತಿಗೆದಾರರಿಂದ ಟೆಂಡರ್ ಕರೆದು ಕಾಮಗಾರಿ ನಿರ್ವಹಣೆಯಲ್ಲಿ ಹೆಚ್ಚಿನ ಪಾರದರ್ಶಕತೆ ತರಬೇಕು ಎಂದು ಶಿಫಾರಸು ಮಾಡಿದೆ.

ತಪ್ಪು ಮಾಡಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡಿಲ್ಲ. ಇದರಿಂದ ಬೇರೆ ಅಧಿಕಾರಿಗಳು ಹೆಚ್ಚು ಹೆಚ್ಚು ತಪ್ಪು ಮಾಡುವುದಕ್ಕೆ ಅವಕಾಶ ನೀಡಿದಂತಾಗುತ್ತದೆ. ಹೀಗಾಗಿ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕಡ್ಡಾಯವಾಗಿ ಇಲಾಖಾ ವಿಚಾರಣೆ ನಡೆಸಲು ಶಿಫಾರಸು ಮಾಡಲಾಗಿದೆ. ಕಳಪೆ ಗುಣಮಟ್ಟದ ಕೆಲಸವಾಗುತ್ತಿದ್ದರೂ ಗುತ್ತಿಗೆದಾರರನ್ನು ಹೊಣೆಯಾಗಿಸದೇ ಇರುವುದನ್ನು ಸಮಿತಿ ಗಂಭೀರವಾಗಿ ಪರಿಗಣಿಸಿದೆ. ಕೆಆರ್‌ಐಡಿಎಲ್ ಹಾಗೂ ನಿರ್ಮಿತಿ ಕೇಂದ್ರದ ಕಾರ್ಯ ವಿಧಾನದಲ್ಲಿ ಬದಲಾವಣೆ ತರಬೇಕೆಂದು ಶಿಫಾರಸು ಮಾಡಲಾಗಿದೆ.

2)